## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.

**ಸಿ.ಸಿ. ನಂ. 1698/2022**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಟಿ. ಪ್ರಭುಲಿಂಗಣ್ಣ | ಸಿ.ಡಬ್ಲ್ಯೂ – 17 |
| ತಂದೆ ಹೆಸರು | : | ತಿಮ್ಮಣ್ಣ | ಪಿ.ಡಬ್ಲ್ಯೂ – 11 |
| ವಯಸ್ಸು | : | 54 ವರ್ಷ | |
| ಉದ್ಯೋಗ | : | ಎ ಎಸ್ ಐ | |
| ವಾಸಸ್ಥಳ | : | ಹಿರಿಯೂರು | ದಿಃ 13.08.2026 |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಜನವರಿ 2022 ರಿಂದ ನವೆಂಬಟ್ 2022 ವರೆಗೆ ನಾನು ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ., ಅಂತ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ15.02.2022 ರಂದು ನಾನು ಠಾಣಾ ಕರ್ತವ್ಯದಲ್ಲಿರುವಾಗ ಸಂಜೆ 05.30 ಗಂಟೆಗೆ ಚಾಸಾ–1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ 66/2022 ರಂತೆ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ಪ್ರ.ವ.ವ.ಯನ್ನು ಮೇಲಾಧಿಕಾರಿಗಳು ಹಾಗೂ ಘನ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ.

ಸಾಕ್ಷಿಗೆ ನಿಪಿಃ1 ರ ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.1(ಬಿ)ಅಂತಾ ಗುರುತಿಸಲಾಯಿತು.

ಸಾಕ್ಷಿಗೆ ಪ್ರ.ವ.ವ. ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಪ್ರ.ವ.ವ. ನಿಪಿಃ 15 ಅಂತಾ, ಸಾಕ್ಷಿಯ ಸಹಿಯನ್ನು ನಿಪಿ.15(ಎ)ಅಂತಾ ಗುರುತಿಸಲಾಯಿತು.

ದಿನಾಂಕ 16.02.2022 ರಂದು ಅಪಘಾತ ಸ್ಥಳಕ್ಕೆ ಭೇಟಿ ನೀಡಿ ಚಾಸಾ–2 ಮತ್ತು 3 ರವರ ಸಮಕ್ಷಮ ಚಾಸಾ–1 ರವರು ತೋರಿಸಿದ ಸ್ಥಳದಲ್ಲಿ ಬೆಳಿಗ್ಗೆ 10.00 ರಿಂದ 10.45 ಗಂಟೆಯವರೆಗೆ ಪಂಚನಾಮೆ ಕ್ರಮ ಜರುಗಿಸಿ, ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ಮಹಜರ್ ಸಮಯದಲ್ಲಿ ಭಾವಚಿತ್ರವನ್ನು ತೆಗೆಯಲಾಗಿರುತ್ತದೆ.

ಸಾಕ್ಷಿಗೆ ನಿಪಿ.2 ಅನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, , ಸಾಕ್ಷಿಯ ಸಹಿಯನ್ನು ನಿಪಿ.2(ಡಿ)ಅಂತಾ ಗುರುತಿಸಲಾಯಿತು.

ಸಾಕ್ಷಿಗೆ ಕಚ್ಚಾ ನಕಾಶೆಯನ್ನು ತೋರಿಸಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಕಚ್ಚಾ ನಕಾಶೆಯನ್ನು ನಿಪಿಃ 16 ಅಂತಾ, ಸಾಕ್ಷಿಯ ಸಹಿಯನ್ನು ನಿಪಿ.16(ಎ)ಅಂತಾ ಗುರುತಿಸಲಾಯಿತು.

ಸಾಕ್ಷಿಯು ನಿಪಿ.3 ಭಾವಚಿತ್ರವನ್ನು ನೋಡಿ ಮಹಜರ್ ಸಮಯದಲ್ಲಿ ತೆಗೆದ ಭಾವಚಿತ್ರ ಎಂದು ಗುರುತಿಸಿರುತ್ತಾರೆ.

ಅದೇ ದಿನ ಚಳ್ಳಕೆರೆ ಪೊಲೀಸ ಠಾಣಾ ಆವರಣದಲ್ಲಿದ್ದ ನಂ.ಕೆಎ-16-ಇಇ -7502 ಮೋಟಾರ್ ಸೈಕಲ್ ಅನ್ನು ಚಾಸಾ-2 ಮತ್ತು 3 ರವರ ಸಮಕ್ಷಮ ಚಾಸಾ-1 ರವರು ತೋರಿಸಿದ ಮೇರೆಗೆ ಬೆಳಿಗ್ಗೆ 11-00 ರಿಂದ 11-45 ರವರೆಗೆ ಪಂಚನಾಮೆ ಕ್ರಮ ಜರುಗಿಸಿ, ವಾಹನವನ್ನು ಠಾಣಾ ಆವರಣದಲ್ಲಿ ಇರಿಸಿಕೊಳ್ಳಲಾಗಿರುತ್ತದೆ.

ಸಾಕ್ಷಿಗೆ ನಿಪಿ.4 ಅನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.4(ಡಿ)ಅಂತಾ ಗುರುತಿಸಲಾಯಿತು.

ದಿನಾಂಕ 20.02.2022 ರಂದು ಆರೋಪಿಗೆ ಠಾಣೆಗೆ ಹಾಜರಾಗಲು ಕಲಂ 41 ಎ ರಡಿ ನೋಟೀಸ್ ಅನ್ನು ನೀಡಿರುತ್ತೇನೆ. ಅದೇ ದಿನ ಆರೋಪಿಗೆ ಐಎಂವಿ ಕಲಂ 133 ರಡಿ ನೋಟೀಸ್ ಜಾರಿ ಮಾಡಿರುತ್ತೇನೆ. ಬೈಕ್ ವಾಹನದ ಆರ್ ಸಿ ದಾಖಲೆಯನ್ನು ತರಲು ತಿಳಿಸಿದ್ದೆ.

ದಿನಾಂಕ 06.04.2022 ರಂದು ವಾಹನ ಬಿಡುಗಡೆ ಪಂಚನಾಮೆಯನ್ನು ಚಾಸಾ-7 ಮತ್ತು 8 ರವರ ಸಮಕ್ಷಮ ಮಧ್ಯಾಹ್ನ 01.00 ರಿಂದ 01.45 ರವರೆಗೆ ಜರುಗಿಸಿ, ವಾಹನದ ಮಾಲೀಕರಾದ ಆರೋಪಿಗೆ ವಾಹನವನ್ನು ಮಧ್ಯಂತರ ವಶಕ್ಕೆ ನೀಡಿರುತ್ತೇನೆ.

ಸಾಕ್ಷಿಗೆ ಕಲಂ 133 ನೋಟೀಸ್ ಅನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ನೋಟೀಸ್ ನಿಪಿಃ17 ಅಂತಾ, ಸಾಕ್ಷಿಯ ಸಹಿಯನ್ನು ನಿಪಿ.17(ಎ)ಅಂತಾ ಗುರುತಿಸಲಾಯಿತು.

ಸಾಕ್ಷಿಗೆ ನಿಪಿಃ 9 ಅನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.9(ಸಿ)ಅಂತಾ ಗುರುತಿಸಲಾಯಿತು.

ಸಾಕ್ಷಿಗೆ ನಾಲ್ಕು ಭಾವಚಿತ್ರಗಳನ್ನು ತೋರಿಸಲಾಗಿ ಸದರಿ ಭಾವಚಿತ್ರಗಳನ್ನು ವಾಹನ ಬಿಡುಗಡೆ ಪಂಚನಾಮೆ ಸಮಯದಲ್ಲಿ ತೆಗೆದ ಭಾವಚಿತ್ರಗಳು ಎಂದು ನೋಡಿ ಗುರುತಿಸಿದ ಮೇರೆಗೆ, ಸದರಿ ಭಾವಚಿತ್ರಗಳನ್ನು ಕ್ರಮವಾಗಿ ನಿಪಿ.18 ರಿಂದ 21 ಅಂತ ಗುರುತಿಸಲಾಯಿತು.

ಸಾಕ್ಷಿಗೆ ಕಲಂ 133 ನೋಟೀಸಿಗೆ ನೀಡಿದ ಉತ್ತರವನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ನೋಟೀಸ್ ಅನ್ನು ನಿಪಿ. 22 ಅಂತಾ, ಸಾಕ್ಷಿಯ ಸಹಿಯನ್ನು ನಿಪಿ.22(ಎ)ಅಂತಾ ಗುರುತಿಸಲಾಯಿತು. ನಿಪಿ.22 ಅನ್ನು ಆರೋಪಿಯಿಂದ ಪಡೆಯಲಾಗಿರುತ್ತದೆ.

ದಿನಾಂಕ 23.04.2022 ರಂದು ನಾನು ಠಾಣೆಯಲ್ಲಿರುವಾಗ ಪಿರ್ಯಾದಿಯು ನೀಡಿದ ಲಿಖಿತ ಹೆಚ್ಚುವರಿ ದೂರನ್ನು ಸ್ವೀಕರಿಸಿಕೊಂಡು, ಈ ಪ್ರಕರಣದಲ್ಲಿ ಐಪಿಸಿ ಕಲಂ 304(ಎ) ಅನ್ನು ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಹೆಚ್ಚುವರಿ ದೂರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಹೆಚ್ಚುವರಿ ದೂರನ್ನು ನಿಪಿಃ 23 ಅಂತಾ, ಸಾಕ್ಷಿಯ ಸಹಿಯನ್ನು ನಿಪಿ.23(ಎ)ಅಂತಾ ಗುರುತಿಸಲಾಯಿತು.

ದಿನಾಂಕ 16.02.2022 ರಂದು ಚಾಸಾ-9 ರಿಂದ 11 ಹೇಳಿಕೆಗಳನ್ನು ಪಡೆದಿರುತ್ತೇನೆ.

ದಿನಾಂಕ 23.04.2022 ರಂದು ಘೋರ ಅಫರಾಧವಾಗಿರುವ ಕಾರಣ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ- 19 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಶ್ರೀ ಬಿ ಸಿ.ಬಿ., ಆರೋಪಿ ಪರ ವಕೀಲರಿಂದಃ**

ನಿಪಿ.1 ಅನ್ನು ನಮ್ಮ ಠಾಣೆಯಲ್ಲಿ ಗಣಕೀಕೃತ ಗೊಳಿಸಲಾಗಿರುತ್ತದೆ ಎಂದರೆ ಸರಿಯಲ್ಲ. ತನಿಖೆಯಲ್ಲಿ ಯಾವುದೇ ಅಪಘಾತ ಸಂಭವಿಸಿಲ್ಲ ಎಂದು ಕಂಡು ಬಂದರೂ ಆರೋಪಿತನ ವಿರುದ್ಧ ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಮಾನ್ಯವಾಗಿ ಪೊಲೀಸ್ ಸಿಬ್ಬಂದಿಗಳು ಕರ್ತವಕ್ಕೆ ಹೊರಗೆ ಹೋಗುವಾಗ ಠಾಣಾ ದಿನಚರಿಯಲ್ಲಿ ನಮೂದಿಸುತ್ತಾರೆ ಎಂದರೆ ಸರಿ. ಅದೇ ರೀತಿ ನಾನು ಸಹಾ ಈ ಪ್ರಕರಣದಲ್ಲಿ ವಿಚಾರಣೆಗೆ ಹೋಗುವಾಗ ಠಾಣಾ ದಿನಚರಿಯಲ್ಲಿ ನಮೂದಿಸಿರುತ್ತೇನೆ ಎಂದರೆ ಸರಿ.

ಸ್ಥಳ ಪಂಚನಾಮೆ ಜರುಗಿಸಲು ಪಂಚರನ್ನು ಮೌಖಿಕವಾಗಿ ಬರ ಮಾಡಿಕೊಂಡಿರುತ್ತೇನೆ. ಸದರಿ ವಿಚಾರವನ್ನ ಮಹಜರ್ ನಲ್ಲಿ ತಿಳಿಸಿರುವುದಿಲ್ಲ. ನಿಪಿ.2 ರಲ್ಲಿ ನಮೂದಿಸಿರುವ ಚಕ್ಕುಬಂದಿಯ ರೀತಿ ನಿಪಿ.3 ರ ಭಾವಚಿತ್ರದಲ್ಲಿ ಕಾಣುತ್ತಿಲ್ಲ ಎಂದರೆ ಸರಿಯಲ್ಲ. ನಿಪಿ.16 ಅನ್ನು ಸ್ಥಳದಲ್ಲೇ ತಯಾರಿಸಿರುತ್ತೇನೆ ಎಂದು ಹೇಳುವುದು ಸುಳ್ಳು ಎಂದರೆ ಸರಿಯಲ್ಲ. ನಿಪಿ.16 ಅನ್ನು ಪ್ರಕರಣಕ್ಕಾಗಿ

ಸೃಷ್ಟಿಸಿಕೊಳ್ಳಲಾಗಿದೆ ಎಂದರೆ ಸರಿಯಲ್ಲ. ನಿಪಿ.3 ರಲ್ಲಿ ತಗ್ಗು ಗುಂಡಿಗಳು ಇರುವುದಿಲ್ಲ ಎಂದರೆ ಸರಿಯಲ್ಲ. ನಿಪಿ.3 ಅನ್ನು ಪ್ರಕರಣಕ್ಕಾಗಿ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ.

ನಿಪಿ.2 ಮತ್ತು 4 ಅನ್ನು ನಾನೇ ಬರೆದಿರುತ್ತೇನೆ. ನಿಪಿ.2 ಮತ್ತು 4 ರಲ್ಲಿರುವ ಬರವಣಿಗೆ ಬೇರೆ ಬೇರೆ ಆಗಿರುತ್ತದೆ ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಭಾವಚಿತ್ರಗಳನ್ನು ಸೃಷ್ಟಿಸಿಕೊಂಡು ಹಾಜರು ಪಡಿಸಲಾಗಿದೆ ಎಂದರೆ ಸರಿಯಲ್ಲ.

ಚಾಸಾ-1 ರಮ ನಮ್ಮ ಠಾಣೆಗೆ ಹಾಜರಾಗಿ ಹೆಚ್ಚುವರಿ ದೂರನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ.23 ಅನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಸಾಕ್ಷಿದಾರರು ನನ್ನ ಮುಂದೆ ಹೇಳಿಕೆಗಳನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ಯಾವುದೇ ಸತ್ಯಾಂಶ ಕಂಡು ಬರದೇ ಇದ್ದರು ಆರೋಪಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ